# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ಪಿ.ಕೆಂಗನಾಳ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಮತ್ತು ಶ್ರೀ ಸುರೇಂದ್ರ ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಧೋಳ ಇವರುಗಳ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

ಓದಲಾಗಿದೆ.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರ ಪತ್ರ ಸಂಖ್ಯೆ ಜಿಪಂಬಾ/ಎಡಿ-10/ಇವಿ/ ವಿನಿದಿ-36/ 2013-14/593/ ದಿನಾಂಕ 11-06-2014

2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 127 ಜಿಪಅ 2013 ದಿನಾಂಕ. 31-07-2014

3. ಶ್ರೀ ಬಿ.ಪಿ.ಕೆಂಗನಾಳ ಮತ್ತು ಶ್ರೀ ಸುರೇಂದ್ರ ದೊಡ್ಡಮನಿ ರವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 30-10-2014 ಮತ್ತು 31-10-2014.

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 11-06-2014ರ ಪತ್ರದ ಜೊತೆ ಶ್ರೀ ಎಂ.ಹೆಚ್.ಗೌಡರ್, ಶ್ರೀ ಬಿ.ಪಿ.ಕೆಂಗನಾಳ, ಹಿಂದಿನ ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಮತ್ತು ಶ್ರೀ ಸುರೇಂದ್ರ ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಧೋಳ ಇವರುಗಳು 2009-10ನೇ ಸಾಲಿನಲ್ಲಿ ರೈತರ ಸಹಕಾರಿ ಸಕ್ಕರೆ ಕಾರ್ಖಾನೆ ನಿಗಮ, ರನ್ನನಗರ ಬಾಗಲಕೋಟೆ ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನವನ್ನು ಸದರಿಯವರು ಬೇರೆ ಕಾಮಗಾರಿಗಳಿಗೆ ಬಳಸಿರುವ ಆರೋಪಗಳಿಗೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಶ್ರೀ ಬಿ.ಪಿ.ಕೆಂಗನಾಳ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಮತ್ತು ಶ್ರೀ ಸುರೇಂದ್ರ ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಧೋಳ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಸದರಿಯವರುಗಳಿಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 31-07-2014ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿಮಾಡಲಾಗಿತ್ತು.

---2

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಆಪಾದಿತ ಅಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ತಮ್ಮ ವಿರುದ್ಧ ಮಾಡಲಾಗಿರುವ ಆರೋಪಗಳನ್ನು ಅಲ್ಲಗಳೆದಿದ್ದು, ತಮ್ಮನ್ನು ಆರೋಪಮುಕ್ತರೆಂದು ಘೋಷಿಸಬೇಕೆಂದು ಕೋರಿರುತ್ತಾರೆ.

ಶ್ರೀ ಎಂ.ಹೆಚ್.ಗೌಡರ್, ಕಾರ್ಯಪಾಲಕ ಇಂಜಿನಿಯರ್, ಇವರು ಈಗಾಗಲೇ ಸೇವೆಯಿಂದ ನಿವೃತ್ತರಾಗಿರುವುದರಿಂದ, ಸದರಿಯವರಿಂದ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟದ ಮೊತ್ತವನ್ನು ಅವರ ವಿರುದ್ಧ ಸಿವಿಲ್ ದಾವೆ ಹೂಡಿ ವಸೂಲಿ ಮಾಡಲು ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರಿಗೆ ದಿನಾಂಕ 31-07-2014ರ ಪತ್ರದ ಮೂಲಕ ತಿಳಿಸಲಾಗಿದೆ.

ಶ್ರೀ ಬಿ.ಪಿ.ಕೆಂಗನಾಳ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಸುರೇಂದ್ರ ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರ ವಿರುದ್ಧದ ಆರೋಪಗಳು ಗಂಬೀರ ಸ್ವರೂಪದ್ದಾಗಿರುವುದರಿಂದ, ಸದರಿ ಆರೋಪದ ಬಗ್ಗೆ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ

**<u>ಆದೇಶ ಸಂಖ್ಯೆ : ಗ್ರಾಅಪ 127 ಜಿಪಅ 2013 ಬೆಂಗಳೂರು, ದಿನಾಂಕ 05-03-2015</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಬಿ.ಪಿ.ಕೆಂಗನಾಳ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ ಮತ್ತು ಶ್ರೀ ಸುರೇಂದ್ರ ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಧೋಳ ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ತಾಂತ್ರಿಕ ಸಹಾಯಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಳಗಾವಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಆದಷ್ಟು ತ್ವರಿತವಾಗಿ ಕೈಗೊಂಡು, ಸದರಿ ನಿಯಮಗಳ ನಿಯಮ 11(23) ರಂತೆ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

---3

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಮಂಜೂರು ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೋತಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ.
6. ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಯೀಮ್ ಮಂಜಿಲ್, 2ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಶಿವಗಿರಿ, ಧಾರವಾಡ-580001.
7. ತಾಂತ್ರಿಕ ಸಹಾಯಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬಾಗಲಕೋಟೆ – ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಸಂಬಂಧಿಸಿದ ಅಧಿಕಾರಿಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರ ಮುಖಾಂತರ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಹೆಚ್ಚುವರಿ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

cc.rws.bgm@gmail.com